## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 921
ಸದಸ್ಯರ ಹೆಸರು : ಶ್ರೀ ಗೋವಿಂದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 21-12-2021
ಉತ್ತರಿಸುವ ಸಚಿವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಸ್ತುತ ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಮಾರಣಾಂತಿಕ ಖಾಯಿಲೆಗಳಿಗೆ ತುತ್ತಾಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ |
| ಆ | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ಒದಗಿಸುವುದು) | ಮಾರಣಾಂತಿಕ ಖಾಯಿಲೆಗಳಾದ ಹೃದ್ರೋಗ ಶಸ್ತ್ರಚಿಕಿತ್ಸೆ, ಕ್ಯಾನ್ಸರ್ ಖಾಯಿಲೆ, ಡಯಾಲಿಸಿಸ್, ಮೂತ್ರಪಿಂಡ ಜೋಡಣೆ ಕಾಯಿಲೆ ಮತ್ತು ಗರ್ಭಕೋಶದ ಶಸ್ತ್ರಚಿಕಿತ್ಸೆ ಖಾಯಿಲೆಗಳಿಗೆ ತುತ್ತಾದವರಿಗೆ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ರೂ.50,000/- ಗಳನ್ನು ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. |
| ಇ | ಮಾರಣಾಂತಿಕ ಖಾಯಿಲೆಗೆ ತುತ್ತಾಗಿ ಕೆಲಸ ನಿರ್ವಹಿಸದ ಪರಿಸ್ಥಿತಿಯಲ್ಲಿರುವವರ ಬದಲಿಗೆ ಅವರ ಕುಟುಂಬದ ಸದಸ್ಯರಿಗೆ ಉದ್ಯೋಗ ನೀಡುವ ವ್ಯವಸ್ಥೆ ಸರ್ಕಾರದಲ್ಲಿದೆಯೇ: | ಮಾರಣಾಂತಿಕ ಕಾಯಿಲೆಗೆ ತುತ್ತಾಗಿ ಕೆಲಸ ನಿರ್ವಹಿಸದ ಪರಿಸ್ಥಿತಿಯಲ್ಲಿರುವವರಿಗೆ ಅವರ ಕುಟುಂಬದವರಿಗೆ ಅನುಕಂಪದ ಆಧಾರದ ನೇಮಕಾತಿ ನೀಡಲು ಅವಕಾಶವಿರುವುದಿಲ್ಲ. |
| ಈ | ಪರ್ಯಾಯ ಕೆಲಸ ನೀಡುವ ವ್ಯವಸ್ಥೆ ಇಲ್ಲ ಎನ್ನುವುದಾದರೇ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಹೊರಡಿಸಿರುವ ಆದೇಶವು ತಮ್ಮ ಇಲಾಖೆಗೆ ಅನ್ವಯಿಸುವುದಿಲ್ಲವೇ? | ಇಲಾಖೆಯಲ್ಲಿ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರು ಸೇವೆಯಲ್ಲಿರುವಾಗಲೇ ಮರಣ ಹೊಂದಿದ್ದಲ್ಲಿ ಅವರ ವಿವಾಹಿತ /ಅವಿವಾಹಿತ/ವಿಚ್ಛೇದಿತ ಮಗಳಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶವಿರುತ್ತದೆ. |

ಸಂ: ಮಮಇ 321 ಐಸಿಡಿ 2021

Halappa BA

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.